ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕೆ ಕುರಿತು

ಶ್ರೀ ಹೆಚ್. ಎಂ. ರಮೇಶ್‌ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

1087 (1184) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕಾ ಅಭಿವೃದ್ಧಿ ಕೇಂದ್ರವನ್ನು ಬಾಗಲಕೋಟೆಯಲ್ಲಿ ಸ್ಥಾಪನೆ ಮಾಡಿರುವ ಮೂಲ ಉದ್ದೇಶವೇನು;

(ಆ) ಈ ಕೇಂದ್ರದ ಮೂಲಕ ಇದುವರೆಗೆ ಯಾವುದೇ ಯೋಜನೆಗಳನ್ನು ಅನುಷ್ಠಾನ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮೀನುಗಾರರ ಶ್ರೇಯೋಭಿವೃದ್ಧಿ ಕೇಂದ್ರವನ್ನು ಸದೃಢಗೊಳಿಸುವಲ್ಲಿ ಸರ್ಕಾರ ವಿಫಲವಾಗುವುದೇ; ಈ ಕೇಂದ್ರದ ಅಭಿವೃದ್ಧಿಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು;

(ಈ) ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭವಾದಾಗಿನಿಂದ ವೇತನಕ್ಕಾಗಿ, ಯೋಜನೆಗಳ ಅನುಷ್ಠಾನಕ್ಕಾಗಿ ವೆಚ್ಚವಾಗಿರುವ ಹಣವೆಷ್ಟು;

(ಉ) ಈ ಕೇಂದ್ರದಲ್ಲಿ ಮಂಜೂರಾದ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು? (ವಿವರ ನೀಡುವುದು)